# ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ರವರ ನ್ಯಾಯಾಲಯ, ಹಿರಿಯೂರು

## ಸಿ.ಸಿ ಸಂಖ್ಯೆ: 1208/2024

| | | | |
|---|---|---|---|
| ಸಾಕ್ಷಿದಾರರ ಹೆಸರು | – | ದುರ್ಗೇಶ್ | ಸಿಡಬ್ಲ್ಯೂ-7 |
| ತಂದೆಯ/ಗಂಡನ ಹೆಸರು | – | ಸಣ್ಣ ನರಸಪ್ಪ | ಪಿಡಬ್ಲ್ಯೂ-6 |
| ವಯಸ್ಸು | – | ಸು. 38 ವರ್ಷ | ಪ್ರ.ವ.ಬೋ<br>ದಿನಾಂಕ: 01.08.2025 |
| ಉದ್ಯೋಗ | – | ಡಿ ಗ್ರೂಪ್ ನೌಕರರು, ನಗರಸಭೆ, ಹಿರಿಯೂರು | |
| ವಾಸ | – | ಹಿರಿಯೂರು ನಗರ | |

**ಮುಖ್ಯ ವಿಚಾರಣೆ: ಮಾನ್ಯ ಎಪಿಪಿಯವರಿಂದ:-**

1. ನಾನು 3 ವರ್ಷಗಳಿಂದ ನಗರಸಭೆ, ಹಿರಿಯೂರಿನಲ್ಲಿ ಡಿ ಗ್ರೂಪ್ ನೌಕರರಾಗಿ ಕರ್ತವ್ಯ ನಿರ್ವಹಿಸುತ್ತಿದ್ದೇನೆ.

2. ಚಾಸಾ-1 ರಿಂದ 6, 8 ಮತ್ತು 9 ರವರ ಪರಿಚಯ ಇರುತ್ತಾರೆ. ಸಾಕ್ಷಿಯು ನಿಪಿ-2 ಮತ್ತು 5 ರ ದಾಖಲೆಯಲ್ಲಿರುವ ತನ್ನ ಸಹಿಗಳನ್ನು ಸಾಕ್ಷಿ ನೋಡಿ ಗುರುತಿಸಿದ್ದರಿಂದ, ಸದರಿ ದಾಖಲೆಗಳಲ್ಲಿರುವ ಸಹಿಗಳನ್ನು **ನಿಪಿ-2(ಸಿ) ಮತ್ತು ನಿಪಿ-5(ಬಿ)** ಎಂದು ಗುರುತಿಸಲಾಯಿತು. ನಾನು ನಿಪಿ-2 ಮತ್ತು 5 ಕ್ಕೆ ಈಗ ಒಂದು ವರ್ಷದ ಹಿಂದೆ ಹಿರಿಯೂರು ನಗರ ಪೊಲೀಸ್ ಠಾಣೆಯಲ್ಲಿ ಸಹಿ ಮಾಡಿದ್ದೇನೆ. ಪೊಲೀಸ್‌ರು ನನ್ನ ಸಮಕ್ಷಮ ಯಾವುದೇ ಪಂಚನಾಮೆ ಮಾಡಿಲ್ಲ. ಪಂಚನಾಮೆಯಲ್ಲಿ ಬರೆದಿರುವ ವಿಚಾರಗಳು ನನಗೆ ಗೊತ್ತಿಲ್ಲ. ಸಹಿ ಮಾಡುವಾಗ ನಾನೊಬ್ಬನೇ ಇದ್ದೆ.

(ಈ ಹಂತದಲ್ಲಿ ಮಾನ್ಯ ಎಪಿಪಿರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ-ಸವಾಲು ಮಾಡಲು ಅನುಮತಿ ಕೋರಿದ್ದಾರೆ. ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ-ಸವಾಲಿನಲ್ಲಿ ಕೇಳುವ ಪ್ರಶ್ನೆಗಳನ್ನು ಕೇಳಲು ಅನುಮತಿ ನೀಡಲಾಯಿತು).

**ಪಾಟೀ–ಸವಾಲುಃ ಮಾನ್ಯ ಎಪಿಪಿಯವರಿಂದಃ–**

ದಿನಾಂಕಃ08.04.2024 ರಂದು ಹಿರಿಯೂರು ನಗರದ ಹೊಸ ನಗರಸಭೆ ಕಟ್ಟಡದ ಮುಂದೆ ಆವರಣದಲ್ಲಿ ಪಂಚನಾಮೆ ಜರುಗಿಸಲು ಸಹಕರಿಸುವಂತೆ ಕೋರಿ ಪೊಲೀಸ್‌ರು ನನಗೆ ನಿಪಿ–5 ರಂತೆ ನೋಟೀಸ್ ನೀಡಿರುತ್ತಾರೆ ಎಂದರೆ ಸರಿಯಲ್ಲ. ಸದರಿ ದಿನದಂದು ನಗರಸಭೆ ಆವರಣಕ್ಕೆ ಪೊಲೀಸ್‌ರು ಬಂದಿದ್ದು ನನ್ನ ಮತ್ತು ಚಾಸಾ–6 ರವರ ಸಮಕ್ಷಮ ಚಾಸಾ–1 ರವರು ತೋರಿಸಿಕೊಟ್ಟಂತೆ ನಿಪಿ–2 ರಂತೆ ಸ್ಥಳ ಪಂಚನಾಮೆ ಜರುಗಿಸಿರುತ್ತಾರೆ ಎಂದರೆ ಸರಿಯಲ್ಲ. ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ–ಸವಾಲುಃ ಆರೋಪಿ ಪರ ಶ್ರೀ ಎಸ್.ಟಿ.ಎಸ್. ವಕೀಲರು ಇಲ್ಲ ಎಂದು ತಿಳಿಸಿರುತ್ತಾರೆ.**

**ಮರು ವಿಚಾರಣೆಃ ಇರುವುದಿಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಮುಕ್ತ ಹೇಳಿಕೆ ಮತ್ತು ನನ್ನ ಉಕ್ತಲೇಖನಕ್ಕೆ ತಕ್ಕಂತೆ ಬೆರಳಚ್ಚು ಮಾಡಿಸಲಾಯಿತು).

ಓ ಹೇ ಕೇ ಸರಿ ಇದೆ

ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ., ಹಿರಿಯೂರು.